ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ನೇವಿ-1/ಅಉಆ/97/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:15-06-2022.

## ಸುತ್ತೋಲೆ

ವಿಷಯ: 2021-22ನೇ ಶೈಕ್ಷಣಿಕ ಸಾಲಿಗೆ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಆಯ್ಕೆಯಾಗಿರುವ ಅತಿಥಿ ಉಪನ್ಯಾಸಕರಿಗೆ ಕಾಲೇಜು ಬದಲಾವಣೆ ಮಾಡಿಕೊಳ್ಳಲು ಅವಕಾಶ ನೀಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:28.01.2022.
2) ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:15-06-2022.

* * * * * * *

2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅಗತ್ಯವಿರುವ ಅರ್ಹ ಅತಿಥಿ ಉಪನ್ಯಾಸಕರನ್ನು ಸರ್ಕಾರದ ಆದೇಶದ ಮೇರೆಗೆ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳಲಾಗುತ್ತಿದೆ. ಅದರಂತೆ, ಇವರೆವಿಗೂ ನಡೆದ 5 ಸುತ್ತುಗಳ ಮತ್ತು ವಿಶೇಷ ಸುತ್ತಿನ ಕೌನ್ಸಿಲಿಂಗ್‌ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳು ಆಯ್ಕೆ ಮಾಡಿಕೊಂಡಿರುವ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಉಲ್ಲೇಖ-(2) ರ ಸುತ್ತೋಲೆಯ ಮೇರೆಗೆ ಕೆಲವು ಅತಿಥಿ ಉಪನ್ಯಾಸಕರು ತಮಗೆ ಕಾರ್ಯಭಾರದ ಕೊರತೆ ಉಂಟಾಗಿರುವುದೆಂದು ತಿಳಿಸಿ, ಕಾಲೇಜು ಬದಲಾವಣೆ ಕೋರಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಿರುತ್ತಾರೆ. ಅಲ್ಲದೆ, ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಇದುವರೆವಿಗೂ ನಡೆದ ಕೌನ್ಸಿಲಿಂಗ್‌ಗಳಲ್ಲಿ ವಿವಿಧ ವಿಷಯಗಳಲ್ಲಿ ಆಯ್ಕೆ ಮಾಡಿಕೊಳ್ಳದೆ ಉಳಿಕೆಯಾಗಿರುವ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳಬೇಕಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರಿಗೆ ಹಾಗೂ ವಿವಿಧ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಸ್ತುತ ಲಭ್ಯವಿರುವ ಕಾರ್ಯಭಾರಕ್ಕೆ ಆಯಾ ವಿಷಯದಲ್ಲಿನ ಮೆರಿಟ್ ಆಧಾರದ ಮೇಲೆ ಕಾಲೇಜನ್ನು ಆಯ್ಕೆ ಮಾಡಿಕೊಳ್ಳಲು 6ನೇ ಸುತಿನ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು **ದಿನಾಂಕ:28-06-2022 ಮತ್ತು ದಿನಾಂಕ:29-06-2022** ರಂದು ಆಯೋಜಿಸಲಾಗಿದೆ.

- ಕಾಲೇಜು ಬದಲಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಅತಿಥಿ ಉಪನ್ಯಾಸಕರು ತಮಗೆ ಅವಶ್ಯವಿದ್ದ ಸ್ಥಳ/ಕಾಲೇಜು ಲಭ್ಯ/ಆಯ್ಕೆಯಾಗದೆ ಇದ್ದಲ್ಲಿ ಸದರಿ ಅತಿಥಿ ಉಪನ್ಯಾಸಕರು ಹಾಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಾಲೇಜಿನಲ್ಲಿಯೇ ಮುಂದುವರೆಯಬಹುದಾಗಿದೆ.

- ಕಾಲೇಜು ಬದಲಾವಣೆ ಬಯಸಿ ಅರ್ಜಿ ಸಲ್ಲಿಸಿರುವ ಅತಿಥಿ ಉಪನ್ಯಾಸಕರು ಪ್ರಸ್ತುತ ಕೌನ್ಸಿಲಿಂಗ್‌ನಲ್ಲಿ ಬೇರೆ ಕಾಲೇಜು ಆಯ್ಕೆ ಮಾಡಿಕೊಂಡಲ್ಲಿ ಅಂತಹ ಅತಿಥಿ ಉಪನ್ಯಾಸಕರಿಂದ ಲಭ್ಯವಾಗುವ/ಉಳಿಕೆಯಾಗುವ ಕಾರ್ಯಭಾರವನ್ನು ನಂತರದ ಅಭ್ಯರ್ಥಿಗಳಿಗೆ ಪ್ರದರ್ಶಿಸಲಾಗುವುದು.

- ದಿನಾಂಕ:24.05.2022 ರಂದು ನಡೆದ ವಿಶೇಷ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಕಾಲೇಜನ್ನು ಆಯ್ಕೆ ಮಾಡಿಕೊಂಡು ಆ ಕಾಲೇಜಿನಲ್ಲಿ ಕರ್ತವ್ಯಕ್ಕೆ ಹಾಜರಾಗುವ ಸಂದರ್ಭದಲ್ಲಿ ಕಾರ್ಯಭಾರ ಕೊರತೆ / ಕಾರ್ಯಭಾರ ಇಲ್ಲದೆ ಹೊರಗುಳಿದಿರುವ ಅಭ್ಯರ್ಥಿಗಳು ಹಾಗೂ ಕಾಲೇಜು ಬದಲಾವಣೆ ಬಯಸಿರುವ ಅತಿಥಿ ಉಪನ್ಯಾಸಕರನ್ನು ಒಳಗೊಂಡಂತೆ ಒಂದು ಕ್ರೋಢಿಕೃತ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗುವುದು.

- ಈ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸುವ ಅಭ್ಯರ್ಥಿಗಳು/ಅತಿಥಿ ಉಪನ್ಯಾಸಕರು ಅವರು ಆಯ್ಕೆ ಮಾಡಿಕೊಳ್ಳುವ ಕಾಲೇಜುಗಳಲ್ಲಿ ಗರಿಷ್ಠ ಕಾರ್ಯಾಭಾರ ಲಭ್ಯವಿಲ್ಲದಿದ್ದಲ್ಲಿ ಎಷ್ಟು ಕಾರ್ಯಭಾರ ಲಭ್ಯವಿರುತ್ತದೆಯೋ ಅಷ್ಟೇ ಕಾರ್ಯಭಾರಕ್ಕೆ ವರದಿ ಮಾಡಿಕೊಳ್ಳುವುದು.

- ಮುಂದುವರೆದು, ಮೇಲಿನ ಪ್ರಕ್ರಿಯೆ ನಂತರ ಇನ್ನೂ ಕಾರ್ಯಭಾರ ಉಳಿಕೆಯಾದಲ್ಲಿ ಸದರಿ ಉಳಿಕೆ ಕಾರ್ಯಭಾರಕ್ಕೆ ನಂತರದಲ್ಲಿ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಕ್ರಮವಹಿಸಲಾಗುವುದು.

27/06/2022

**ಮುಖ್ಯ ಆಡಳಿತಾಧಿಕಾರಿಗಳು**
ಕಾಲೇಜು ಶಿಕ್ಷಣ ಇಲಾಖೆ

**<u>ಇವರಿಗೆ; ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ;</u>**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಈ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4. ಕಛೇರಿ ಪ್ರತಿ